# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 150 (91)

ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜು (ಸಂದೇಶ್ ನಾಗರಾಜು)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 13.09.2021

ಉತ್ತರಿಸುವವರು : ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಬಂಡೀಪುರ ರಾಷ್ಟ್ರೀಯ ಉದ್ಯಾನವನದ ಅತ್ಯಂತ ಆಯಕಟ್ಟಿನ ಸ್ಥಳವಾದ ಕೆಕ್ಕನಹಳ್ಳ ಅರಣ್ಯ ಇಲಾಖೆ ಚೆಕ್‌ಪೋಸ್ಟ್ ನಲ್ಲಿ ಸಿ.ಸಿ.ಟಿ.ವಿ. ಕ್ಯಾಮರಾಗಳು ಕೆಟ್ಟು ಹೋಗಿರುವುದು ಚಾಲ್ತಿಯಲ್ಲಿರುವ ಸಿ.ಸಿ.ಟಿ.ವಿ ಕ್ಯಾಮರಾಗಳು ನೆಲದ ಕಡೆಗೆ ಬಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಪ್ರಕಟವಾಗಿರುವ ವರದಿಯನ್ನು ಸರ್ಕಾರ ಗಮನಿಸಿದೆಯೇ; | ಹೌದು,<br><br>ಸಿ.ಸಿ.ಟಿ.ವಿ. ಕ್ಯಾಮರಾಗಳು ಗಾಳಿಯಿಂದ ಹಾಗೂ ಕೋತಿಗಳಿಂದ ನೆಲದ ಕಡೆಗೆ ಬಾಗಿದ್ದು, ಸದರಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಸರಿಪಡಿಸಲಾಗಿದೆ. |
| (ಆ) | ಇದರಿಂದ ಅರಣ್ಯ ಉತ್ಪನ್ನಗಳ ಕಳ್ಳಸಾಗಾಣಿಕೆದಾರರಿಗೆ ಅನುಕೂಲವಾಗಿರುವುದು ವಾಹನಗಳ ಗುರುತಿಸುವಿಕೆ ಮತ್ತು ತಪಾಸಣೆಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತನಿಖಾ ಠಾಣೆಯಲ್ಲಿ ಉಪವಲಯ ಅರಣ್ಯಾಧಿಕಾರಿ ಹಾಗೂ ಇತರೆ ಸಿಬ್ಬಂದಿಗಳು (24/7) ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದಲ್ಲದೆ, ಊಟಿ ಮೈಸೂರು ರಸ್ತೆಯಲ್ಲಿ ಬಂಡೀಪುರದ ಪೋಲೀಸ್ ಉಪ ಠಾಣೆ (Out Post) ನಲ್ಲಿಯು ಸಹ ಪೋಲೀಸ್ ಇಲಾಖೆ ವತಿಯಿಂದ ಸಿ.ಸಿ.ಟಿ.ವಿಗಳನ್ನು ಅಳವಡಿಸಲಾಗಿರುತ್ತದೆ ಮತ್ತು ಮೇಲುಕಾಮನಹಳ್ಳಿ ಅರಣ್ಯ ಪ್ರವೇಶ ದ್ವಾರದಲ್ಲಿಯು ಸಹ ಸಿ.ಸಿ.ಟಿ.ವಿ. ಗಳನ್ನು ಇಲಾಖಾ ವತಿಯಿಂದ ಅಳವಡಿಸಲಾಗಿರುತ್ತದೆ.<br><br>ಆದುದರಿಂದ, ಅರಣ್ಯ ಉತ್ಪನ್ನಗಳ ಕಳ್ಳ ಸಾಗಾಣಿಕೆ ನಿಯಂತ್ರಿಸಲು ಕೆಕ್ಕನಹಳ್ಳ ಹೊರತಾಗಿಯೂ ಸಹ ಇತರೆ ಸ್ಥಳಗಳಲ್ಲಿ ಸಿ.ಸಿ.ಟಿ.ವಿ. ಅಳವಡಿಸಿ ಕಳ್ಳಸಾಗಾಣಿಕೆ ನಿಯಂತ್ರಣಕ್ಕೆ ಸೂಕ್ತ ಕ್ರಮವಹಿಸಲಾಗಿರುತ್ತದೆ |
| (ಇ) | ಈ ಬಗ್ಗೆ ಸೂಕ್ತ ಕ್ರಮ ಜರುಗಿಸಿ, ಇಲ್ಲಿ ಪ್ರಬಲವಾಗಿರುವ ಹೆಚ್ಚಿನ ವ್ಯಾಪ್ತಿಯುಳ್ಳ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಸರಿಯಾದ ರೀತಿಯಲ್ಲಿ ಸ್ಥಾಪಿಸಿ, ಯಾವಾಗಲೂ ಸುಸ್ಥಿತಿಯಲ್ಲಿಡಲು ಕ್ರಮ ಜರುಗಿಸಲಾಗುವುದೇ? | ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕೆಕ್ಕನಹಳ್ಳ ಅರಣ್ಯ ತನಿಖಾ ಠಾಣೆಯಲ್ಲಿ ಈಗಾಗಲೇ ಅಳವಡಿಸಿರುವ ಸಿ.ಸಿ.ಟಿ.ವಿ. ಕ್ಯಾಮರಾಗಳು ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅವಶ್ಯಕತೆ ಕಂಡು ಬಂದಲ್ಲಿ, ಬದಲಿಸಿ ಇನ್ನು ಉತ್ತಮ ರೀತಿಯ ಪ್ರಬಲ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಅಪಜೀ 25 ಎಫ್‌ಡಿಪಿ 2021

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ ಮತ್ತು ನಾಗರೀಕ ಸರಬರಾಜು
ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು